ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-1**

ಸಂಖ್ಯೆ:ಸಿ4(6) ಸಪ್ರೌಶಾ/ಶಾ.ಕಾ.ಪ್ರ-42/2020-21 ದಿನಾಂಕ: 29.01.2021

-ಸುತ್ತೋಲೆ-

ವಿಷಯ: ರಾಜ್ಯದಲ್ಲಿನ ಸರ್ಕಾರಿ, ಅನುದಾನ ಮತ್ತು ಅನುದಾನ ರಹಿತ ಪ್ರೌಢ ಶಾಲೆಗಳಲ್ಲಿನ 9 ಮತ್ತು 10ನೇ ತರಗತಿ ವಿದ್ಯಾರ್ಥಿಗಳಿಗೆ ಶಾಲೆಗಳನ್ನು ಪೂರ್ಣ ಪ್ರಮಾಣದಲ್ಲಿ ತರಗತಿಗಳನ್ನು ನಡೆಸುವ ಬಗ್ಗೆ.

ಉಲ್ಲೇಖ:
1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ: 28.01.2021ರಂದು ನಡೆದ ಸಭೆಯಲ್ಲಿ ಕೈಗೊಂಡ ನಿರ್ಣಯಗಳು
2. ಈ ಕಚೇರಿಯ ಸುತ್ತೋಲೆ ಸಂಖ್ಯೆ:ಸಿ4(6) ಸಪ್ರೌಶಾ/ಶಾ.ಕಾ.ಪ್ರ-23/2020-21 ದಿನಾಂಕ:23.12.2020
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಶಿಕ್ಷಣ ಇಲಾಖೆ, ಬೆಂಗಳೂರು ರವರ ಟಿಪ್ಪಣಿಯಲ್ಲಿನ ಆದೇಶ ದಿನಾಂಕ: 29.01.2021

**********

ಉಲ್ಲೇಖ(1)ರಂತೆ ರಾಜ್ಯದಲ್ಲಿ ಪ್ರಸ್ತುತ ಶೈಕ್ಷಣಿಕ ವರ್ಷದ ಶಾಲಾ ಪ್ರಾರಂಭ ಮತ್ತು ವಿದ್ಯಾಗಮ ಕಾರ್ಯಕ್ರಮಗಳ ವಿಸ್ತರಣೆ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಆರೋಗ್ಯ ಇಲಾಖೆಯ ಕೋವಿಡ್-19 ತಾಂತ್ರಿಕ ಸಲಹಾ ಸಮಿತಿಯ ಸದಸ್ಯರು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ 9ನೇ ತರಗತಿಯಿಂದ 12ನೇ ತರಗತಿಯವರೆಗೆ ಪ್ರತಿ ದಿನ ಪೂರ್ಣಾವಧಿ ಶಾಲೆಯನ್ನು ನಡೆಸಲು ಹಾಗೂ 6 ರಿಂದ 8ನೇ ತರಗತಿಯವರೆಗೆ ಉಲ್ಲೇಖ (2)ರಂತೆ ನಡೆಯುತ್ತಿರುವ ವಿದ್ಯಾಗಮ ಕಾರ್ಯಕ್ರಮ ಮುಂದುವರೆಸುವಂತೆ ತಿರ್ಮಾನಿಸಲಾಗಿದೆ.

ಉಲ್ಲೇಖ(3)ರಂತೆ ಈ ಕುರಿತು ಅನುಮೋದನೆ ಆಗಿರುತ್ತದೆ. ಆದ್ದರಿಂದ ದಿನಾಂಕ; 01.02.2021ರಿಂದ ಈ ಕೆಳಗಿಂತೆ ಕ್ರಮವಹಿಸಲು ಸೂಚಿಸಿದೆ.

- ರಾಜ್ಯದಲ್ಲಿನ ಎಲ್ಲ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಪ್ರೌಢ ಶಾಲೆಗಳಲ್ಲಿನ 9ನೇ ಮತ್ತು 10ನೇ ತರಗತಿಗಳನ್ನು ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ 11 ಮತ್ತು 12ನೇ ತರಗತಿಗಳನ್ನು ದಿನಾಂಕ: 01.02.2021ರಿಂದ ಪ್ರತಿ ದಿನ ಪೂರ್ಣಾವಧಿ ನಡೆಸಲು ತಿಳಿಸಿದೆ. ಹಾಗೂ ಉಲ್ಲೇಖ(2)ರ ಸುತ್ತೋಲೆಯಲ್ಲಿ ನಿಗದಿ ಪಡಿಸಿರುವ ಪ್ರಮಾಣಿತ ಕಾರ್ಯಾಚರಣಾ ವಿಧಾನದಂತೆ ಮುಂದುವರೆಸುವುದು. ಪದವಿ ಪೂರ್ವ ತರಗತಿಗಳ ಕಾಲೇಜುಗಳ ಈ ಕುರಿತು ನಿರ್ದೇಶಕರು, ಪದವಿ ಪೂರ್ವ ಇಲಾಖೆ ಇವರು ನೀಡುವ ಮಾರ್ಗಸೂಚಿಗಳನ್ನು ಅನುಸರಿಸುವುದು.
- 6 ರಿಂದ 8ನೇತರಗತಿಯವರೆಗೆ ಈ ಹಿಂದೆ ಉಲ್ಲೇಖ(2)ರಲ್ಲಿ ತಿಳಿಸಿದಂತೆ ವಿದ್ಯಾಗಮ ಕಾರ್ಯಕ್ರಮವನ್ನು ಮುಂದುವರೆಸುವುದು.
- ಪೂರ್ಣ ಪ್ರಮಾಣದಲ್ಲಿ 9 ಮತ್ತು 10ನೇ ತರಗತಿಗಳನ್ನು ನಡೆಸುವುದರಿಂದ ವಿದ್ಯಾರ್ಥಿಗಳು ಮನೆಯಿಂದಲೇ ಮಧ್ಯಾಹ್ನದ ಊಟ/ಉಪಹಾರ ತರುವಂತೆ ವಿದ್ಯಾರ್ಥಿಗಳಿಗೆ ಸೂಚನೆ ನೀಡುವುದು.
- ಮಕ್ಕಳು ಶಾಲೆಗೆ ಮತ್ತು ವಿದ್ಯಾಗಮ ಕಾರ್ಯಕ್ರಮಕ್ಕೆ ಹಾಜರಾಗುವಾಗ ಪೋಷಕರ ಅನುಮತಿ ಪತ್ರ ತರುವುದು ಕಡ್ಡಾಯ. ಅನುಮತಿ ಪತ್ರದಲ್ಲಿ ಮಗುವಿಗೆ ಯಾವುದೇ ಕೋವಿಡ್-19ರ ಸೋಂಕಿನ ಲಕ್ಷಣಗಳಿರುವುದಿಲ್ಲವೆಂಬುದನ್ನು ದೃಢೀಕರಿಸಬೇಕು.

➢ ಶಾಲೆಗೆ ಹಾಜರಾಗಲು ಬಯಸದೇ ಇರುವ ವಿದ್ಯಾರ್ಥಿಗಳಿಗೆ ಈಗ ಅನುಸರಿಸುತ್ತಿರುವ ಆನ್‌ಲೈನ್/ ಇತರೆ ಪರ್ಯಾಯ ವ್ಯವಸ್ಥೆಯನ್ನು ಮುಂದುವರೆಸಿಕೊಂಡು ಹೋಗಬೇಕು/ಒದಗಿಸಬೇಕು.

➢ ಶಾಲೆಗಳಲ್ಲಿ ವಿದ್ಯಾರ್ಥಿಗಳ ಹಾಜರಾತಿ ಕಡ್ಡಾಯವಲ್ಲ.

**ಪ್ರೌಢ ಶಾಲೆಗಳಲ್ಲಿ 8, 9 ಮತ್ತು 10ನೇ ತರಗತಿಗಳನ್ನು ನಡೆಸಲು ಸಲಹಾತ್ಮಕ ವೇಳಾಪಟ್ಟಿ**

| ದಿನಗಳು | ಸಮಯ | ನಡೆಯುವ ತರಗತಿಗಳು |
|---|---|---|
| ಸೋಮವಾರ | 10.00 ರಿಂದ 4.30 | 9 ಮತ್ತು 10 |
| | 10.00 ರಿಂದ 12.30 | 8ನೇ ತರಗತಿ ವಿದ್ಯಾಗಮ |
| ಮಂಗಳವಾರ | 10.00 ರಿಂದ 4.30 | 9 ಮತ್ತು 10 |
| ಬುಧವಾರ | 10.00 ರಿಂದ 4.30 | 9 ಮತ್ತು 10 |
| | 10.00 ರಿಂದ 12.30 | 8ನೇ ತರಗತಿ ವಿದ್ಯಾಗಮ |
| ಗುರುವಾರ | 10.00 ರಿಂದ 4.30 | 9 ಮತ್ತು 10 |
| ಶುಕ್ರವಾರ | 10.00 ರಿಂದ 4.30 | 9 ಮತ್ತು 10 |
| | 10.00 ರಿಂದ 12.30 | 8ನೇ ತರಗತಿ ವಿದ್ಯಾಗಮ |
| ಶನಿವಾರ | 10.00 ರಿಂದ 12.30 | 9 ಮತ್ತು 10 |

**ವಿಶೇಷ ಸೂಚನೆ:-**

ತರಗತಿಗಳನ್ನು ಪೂರ್ಣ ಪ್ರಮಾಣದಲ್ಲಿ ನಡೆಸಲು ಶಾಲಾ ಹಂತದಲ್ಲಿ ಕೊಠಡಿಗಳ ಲಭ್ಯತೆ, ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಶಿಕ್ಷಕರ ಸಂಖ್ಯೆಯನ್ನು ಆಧರಿಸಿಕೊಂಡು ವೇಳಾ ಪಟ್ಟಿಯನ್ನು ಪರಿಷ್ಕರಿಸಿ ತರಗತಿಗಳನ್ನು ನಡೆಸಬಹುದಾಗಿದೆ.

ಉಲ್ಲೇಖ(2)ರ ಸುತ್ತೋಲೆಯಲ್ಲಿರುವ ಎಲ್ಲ ಅಂಶಗಳನ್ನು ಗಮನದಲ್ಲಿರಿಸಿಕೊಂಡು ರಾಜ್ಯದಲ್ಲಿನ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳಲ್ಲಿ ಅನುಷ್ಠಾನಗೊಳಿಸಲು ಉಪನಿರ್ದೇಶಕರು(ಆಡಳಿತ) ಇವರು ಅಗತ್ಯ ಕ್ರಮವಹಿಸಲು ಸೂಚಿಸಿದೆ.

ಕೋವಿಡ್ ಹಿನ್ನಲೆಯಲ್ಲಿ ಕಾಲಕಾಲಕ್ಕೆ ಸರ್ಕಾರ, ಇಲಾಖೆ ಮತ್ತು ಜಿಲ್ಲಾಡಳಿತಗಳು ನೀಡುವ ಸೂಚನೆಗಳನ್ನು ಪಾಲಿಸಲು ತಿಳಿಸಿದೆ.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ,
ಬೆಂಗಳೂರು

ಇವರಿಗೆ:-

01. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ ಮತ್ತು ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಕಳುಹಿಸುತ್ತಾ ಸರ್ಕಾರದ ಹಾಗೂ ಆರೋಗ್ಯ ಇಲಾಖೆಯ ರಾಜ್ಯ ಕೋವಿಡ್ ತಾಂತ್ರಿಕ ಸಲಹಾ ಸಮಿತಿ ಸದಸ್ಯರ ನಡವಳಿಯಂತೆ ಕ್ರಮವಹಿಸಲು ತಿಳಿಸಿದೆ.
02. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಉಪನಿರ್ದೇಶಕರು (ಆಡಳಿತ ಮತ್ತು ಅಭಿವೃದ್ಧಿ),ರವರ ಮೂಲಕ ಮುಂದಿನ ಕ್ರಮಕ್ಕಾಗಿ,

ಪ್ರತಿಯನ್ನು:

01. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
02. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
03. ಮಾನ್ಯ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
04. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು ಎಸ್.ಎಸ್.ಕೆ/ಆರ್.ಎಂ.ಎಸ್.ಎ ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ
05. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ
06. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ರವರಿಗೆ ಮಾಹಿತಿಗಾಗಿ
07. ಆಯುಕ್ತರು, ಗ್ರಾಮೀಣಾಭಿವೃದ್ದಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
08. ಆಯುಕ್ತರು ಸಮಾಜ ಕಲ್ಯಾಣ ಇಲಾಖೆ ಬೆಂಗಳೂರು ರವರಿಗೆ ಮಾಹಿತಿಗಾಗಿ
09. ಆಯುತ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
10. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
11. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
12. ಆಯುಕ್ತರು, ಸಾರಿಗೆ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
13. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ
14. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕಕರುಗಳಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ
15. ಸಹ ನಿರ್ದೇಶಕರು ಮಧ್ಯಾಹ್ನ ಉಪಹಾರ ಯೋಜನೆ ಬೆಂಗಳೂರು ರವರಿಗೆ. ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ
16. ಕಛೇರಿ ಪ್ರತಿ